ನಿರುದ್ಯೋಗಿ ಪದವೀಧರರ ಬಗ್ಗೆ

2925 - ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ಕಾರ್ಮಿಕ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೇ-

ಅ) ಕರ್ನಾಟಕದ 'ನಿರುದ್ಯೋಗಿ' ಪದವೀಧರರ ಸಂಖ್ಯೆ ಎಷ್ಟು?

ಆ) ಈ ನಿರುದ್ಯೋಗಿ ಪದವೀಧರರಿಗೆ ಉದ್ಯೋಗ ಸಿಗುವವರೆಗೆ ನಿರುದ್ಯೋಗಿ ಭತ್ಯೆವು ಕೊಡುವ ಬಗ್ಗೆ ಸರ್ಕಾರ ಗಮನ ಹರಿಸುವುದೆ?

ಶ್ರೀ ಎ.ಎಸ್. ನಾಡಗೌಡ (ಕಾರ್ಮಿಕ ರಾಜ್ಯ ಸಚಿವರು)

ಅ) 1991ರ ಜೂನ್ ಅಂತ್ಯಕ್ಕೆ 1,24,750.

ಆ) ಈ ವಿಷಯ ಸರ್ಕಾರದ ಪರಿಶೀಲನೆಯಲ್ಲಿ ಇಲ್ಲ.

ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಒದಗಿಸುವ ಬಗ್ಗೆ.

2926 - ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ಸಣ್ಣ ಕೈಗಾರಿಕೆ ಪ್ರಾರಂಭಿಸಲು ಈಗಾಗಲೇ ಅನೇಕ ಕೈಗಾರಿಕೋದ್ಯಮಿಗಳು ಕೆ.ಎಸ್.ಎಫ್.ಸಿ. ಹಾಗೂ ಬ್ಯಾಂಕ್‌ಗಳಿಂದ ಸಾಲ ಪಡೆದು ಇಡೀ ಘಟಕ ತಯಾರಾಗಿದ್ದರೂ ಸಹ ಸರ್ಕಾರ ಈ ಘಟಕಗಳಿಗೆ ವಿದ್ಯುತ್ ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ವಿದ್ಯುತ್ ಇಲ್ಲದೆ ತಯಾರಿಯಾಗದ ಕೇವಲ ಬಡ್ಡಿ ಮಾತ್ರ ಕಟ್ಟುತ್ತಿರುವ ಸಣ್ಣ ಕೈಗಾರಿಕೋದ್ಯಮಿಗಳ ನೆರವಿಗೆ ಸರ್ಕಾರ ಬರುವುದೇ?

ಶ್ರೀ ನಸೀರ್ ಅಹಮದ್ (ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು)

ಅ) ಹೌದು.

ಆ) ಹೌದು. ಎಲ್ಲಾ ಪ್ರಕರಣಗಳಲ್ಲಿ ವಿದ್ಯುತ್ತೀಕರಣವನ್ನು ಮಾಡಲು ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯೊಂದಿಗೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗಿದೆ.

ತುಮಕೂರು ಜಿಲ್ಲೆ ಆಸ್ಪತ್ರೆಯನ್ನು ಆಧುನೀಕರಣಗೊಳಿಸುವುದು

2920 - ಶ್ರೀ ಕೆ. ಲಕ್ಕಪ್ಪ (ಕುಣಿಗಲ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ತುಮಕೂರು ಜಿಲ್ಲಾ ಆಸ್ಪತ್ರೆಯನ್ನು ಆಧುನೀಕರಣಗೊಳಿಸಲು 1991-92ನೇ ಸಾಲಿನಲ್ಲಿ ಸರ್ಕಾರ ಹಣವನ್ನು ಬಿಡುಗಡೆ ಮಾಡಿದೆಯೇ?

ಆ) ಹಾಗಿಲ್ಲದಿದ್ದಲ್ಲಿ ತುಮಕೂರು ಆಸ್ಪತ್ರೆಯನ್ನು ಆಧುನೀಕರಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ?

ಶ್ರೀ ಜಿ. ಪುಟ್ಟಸ್ವಾಮಿ ಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೌದು.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.